4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಧುಗಿರಿ

ಎಸ್.ಸಿ. ನಂಃ 5033/2019

**(ದಿನಾಂಕಃ 04-10-2021 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.)**

ಹೆಸರುಃ ಪ್ರವೀಣ್ ಕುಮಾರ್ ಪಿ.ಡಬ್ಲ್ಯೂ- 16.

ತಂದೆಯ ಹೆಸರುಃ ತಿಮ್ಮೇಗೌಡ ಸಿ.ಡಬ್ಲ್ಯೂ- 23.

ವಯಸ್ಸುಃ 40 ವರ್ಷ

ಉದ್ಯೋಗಃ ವ್ಯವಸಾಯ

ವಾಸಃ ಗುಬ್ಬಿ

**ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ**

ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ತುಮಕೂರು ಜಿಲ್ಲಾ ಆಸ್ಪತ್ರೆಯ ಶವಾಗಾರದ ಬಳಿ ನನ್ನ ಸ್ನೇಹಿತನ ಜೊತೆ ಹೋಗಿದ್ದೆನು. ಅಲ್ಲಿ ಜನ ಸೇರಿದ್ದರು. ಒಂದು ಶವ ಇತ್ತು. ಅದು ಯಾರ ಶವ ಮತ್ತು ದೇಹದ ಮೇಲೆ ಯಾವ ಗುರುತುಗಳು ಇದ್ದವು ಎಂದು ನಾನು ಗಮನಿಸಲಿಲ್ಲ. ಆ ದಿನ ಮತ್ತು ಸಮಯ ನನಗೆ ಗೊತ್ತಿಲ್ಲ. ಸಾಕ್ಷಿಗೆ ಫೋಟೋಗಳನ್ನು ತೋರಿಸಲಾಗಿ ಅವುಗಳಲ್ಲಿ ತಾನು ಇಲ್ಲವಾಗಿ ನುಡಿಯುತ್ತಾರೆ. ನಾನು ಯಾವುದೇ ಹೇಳಿಕೆ ನೀಡಿಲ್ಲ.

***(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಮಾನ್ಯ ಪಿಪಿ ಯವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಪರಿಶೀಲಿಸಿ, ಅನುಮತಿ ನೀಡಲಾಯಿತು.)***

**ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕಃ 09-01-2019 ರಂದು ಬೆಳಿಗ್ಗೆ 11-30 ರಿಂದ ಮಧ್ಯಾಹ್ನ 2-00 ಗಂಟೆಯವರೆಗೆ ತುಮಕೂರು ಜಿಲ್ಲಾ ಆಸ್ಪತ್ರೆಯ ಶವಗಾರದ ಬಳಿ ಇದ್ದೆ ಎಂದರೆ ಸರಿಯಲ್ಲ. ಆ ಕಾಲಕ್ಕೆ ಅಲ್ಲಿದ್ದ ಶವ ರಾಮಸ್ವಾಮಿರವರ ಮಗ ಮನುರವರ ಶವ ಎಂದು ಗುರುತಿಸಿದೆ ಎಂದರೆ ಸರಿಯಲ್ಲ. ದಿನಾಂಕಃ 07-01-2019 ರಂದು ರಾತ್ರಿ ವೇಳೆಯಲ್ಲಿ ಯಾರೋ ದುಷ್ಕರ್ಮಿಗಳು ಕೊರಟಗೆರೆ ಬಳಿ ಕರೆದುಕೊಂಡು ಹೋಗಿ ಯಾವುದೋ ಕಾರಣಕ್ಕೆ ಆಯುಧದಿಂದ ಇರಿದು ಕೊಲೆ ಮಾಡಿದ್ದಾಗಿ ಟಿ.ವಿ ಮಾಧ್ಯಮದಲ್ಲಿ ನೋಡಿದ ವಿಚಾರ ನಾನು ಪೋಲಿಸರಿಗೆ ತಿಳಿಸಿದೆ ಎಂದರೆ ಸರಿಯಲ್ಲ.

ನಂತರ, ಮೃತ ಮನು ರವರ ತಾಯಿಯನ್ನು ವಿಚಾರಿಸಿದಾಗ, ಆಕೆಯ ಮಗ ಮನು 6 ನೇ ಆರೋಪಿ ಬಸವರಾಜು ರವರ ಮಗಳೊಂದಿಗೆ ಹೋಗಿದ್ದರಿಂದ ಕೊಲೆ ಮಾಡಿಸಿದ್ದಾಗಿ ತಿಳಿಯಿತು ಎಂದರೆ ಸರಿಯಲ್ಲ.

ಸದರಿ ವಿಚಾರವಾಗಿ ದಿನಾಂಕಃ 09-01-2019 ರಂದು ನನಗೆ ಈಗ ವಿವರವಾಗಿ ಓದಿ ಹೇಳಲಾದಃ " ಇದು ತುಮಕೂರು ......ಅಭಿಪ್ರಾಯವಾಗಿದೆ " ಎಂಬುದಾಗಿ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-17(ಓ) ಎಂದು ಗುರುತಿಸಲಾಯಿತು. ಸದರಿ ಎಲ್ಲಾ ವಿಚಾರಗಳು ನನಗೆ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರಃ ಶ್ರೀ. ಟಿ.ಎಸ್.ಕೆ ವಕೀಲರಿಂದಃ ಏನು ಇಲ್ಲ.**

**ಮರು ವಿಚಾರಣೆಃ** ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)**

ಓದಿ ಹೇ ಕೇ ಸರಿ ಇದೆ

4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮಧುಗಿರಿ